**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಧನಂಜಯ ಸರ್ಜಿ ರವರು ನಿಯಮ-72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ಸಾವಿರಕ್ಕೂ ಹೆಚ್ಚು ಸರಕಾರಿ ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿಗಳನ್ನು ಪ್ರಾರಂಭಿಸಲು ಆದೇಶವಾಗಿದ್ದರೂ, ಇದಕ್ಕೆ ಪೂರಕವಾಗಿ ಖಾಯಂ ಶಿಕ್ಷಕರ ನೇಮಕಾತಿ, ಹೆಚ್ಚುವರಿ ಸಿಬ್ಬಂದಿ, ಪ್ರವೇಶಾತಿ ಪಡೆದ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಮೊಟ್ಟೆ, ಬಾಳೆಹಣ್ಣು ಹಾಗೂ ಮಧ್ಯಾಹ್ನ ಬಿಸಿಯೂಟದ ಸಾಮಗ್ರಿ ನೀಡದಿರುವುದು, ಸಮವಸ್ತ್ರ ನೀಡದಿರುವುದು ಸೇರಿದಂತೆ, ಗ್ರಾಮೀಣ ಪ್ರದೇಶದ ಬಡ ಮಕ್ಕಳೇ ಹೆಚ್ಚಾಗಿರುವ ಸರ್ಕಾರಿ ಶಾಲೆಗಳಲ್ಲಿ ಪ್ರಾರಂಭಿಸಿರುವ ಎಲ್.ಕೆ.ಜಿ ಮತ್ತು ಯು.ಕೆಜಿ ತರಗತಿಗಳಿಗೆ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ವಿಫಲವಾಗಿದ್ದು, ಇದರಿಂದಾಗುತ್ತಿರುವ ತೊಂದರೆಗಳ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

**ಉತ್ತರ:-**

ರಾಜ್ಯದಲ್ಲಿ 2742 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ಅನುಮೋದನೆಯನ್ನು ನೀಡಲಾಗಿದೆ.

ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತಿ ಹೆಚ್ಚು ಶಿಕ್ಷಕರ ಖಾಲಿ ಹುದ್ದೆ ಇದ್ದು, ಈ ಹುದ್ದೆಗಳ ಭರ್ತಿಮಾಡುವವರೆಗೆ ಹೊಸ ಹುದ್ದೆಗಳಿಗೆ ಖಾಯಂ ಶಿಕ್ಷಕರನ್ನು ನೇಮಕಗೊಳಿಸಲು ಅವಕಾಶವಿರುವುದಿಲ್ಲ. ಸದ್ಯ ಇದಕ್ಕೆ ಪೂರಕವಾಗಿ 3032 ಅತಿಥಿ ಶಿಕ್ಷಕರು ಹಾಗೂ 2254 ಆಯಾಗಳನ್ನು ಗೌರವ ಸಂಭಾವನೆ ಆಧಾರದ ಮೇಲೆ ಕರ್ನಾಟಕ ಪಬ್ಲಿಕ್ ಶಾಲೆಗಳ ಮಾದರಿಯಲ್ಲಿ ಈಗಾಗಲೇ ನೇಮಕ ಮಾಡಲಾಗಿದೆ.

ಸದರಿ ತರಗತಿಗಳಿಗೆ SATS ಪ್ರಕಾರ 71093 ಮಕ್ಕಳು ದಾಖಲಾತಿ ಪಡೆದುಕೊಂಡಿರುತ್ತಾರೆ. ಮುಂದುವರೆದು, ಸದರಿ ತರಗತಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೇಂದ್ರ ಸರ್ಕಾರದ ಯೋಜನಾ ಅನುಮೋದನಾ ಮಂಡಳಿ(PAB)ಯ ಮಾರ್ಗಸೂಚಿ ಹಾಗೂ ಮಾನದಂಡಗಳನ್ವಯ ಪ್ರತಿ ಶಾಲೆಗೆ ಮಕ್ಕಳ ಕಲಿಕಾ ಪೀಠೋಪಕರಣಗಳು, ಶುದ್ಧ ಕುಡಿಯುವ ನೀರು, ಹಾಗೂ ಶಾಲಾ ಕೊಠಡಿ ಒಳಗೆ ಹಾಗೂ ಶಾಲಾ ಆವರಣ ಒಳಗೆ ಗೋಡೆಬರಹ

ಚಿತ್ರಗಳನ್ನು ಬರೆಸುವುದು ಒಳಗೊಂಡಂತೆ ಹೊರಾಂಗಣ ಕ್ರೀಡಾ ಸಾಮಗ್ರಿಗಳು, ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಕೇಂದ್ರ ಸರ್ಕಾರದ ಯೋಜನಾ ಅನುಮೋದನಾ ಮಂಡಳಿ(PAB)ಯ ಹಾಗೂ ಪಿ.ಎಂ.ಶ್ರೀ ಯೋಜನೆಯ ಮಾರ್ಗಸೂಚಿ ಹಾಗೂ ಮಾನದಂಡಗಳನ್ವಯ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ವತಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿನ ಪ್ರತಿ ಶಾಲೆಗೆ ವಾರ್ಷಿಕ ರೂ. 3 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲಾಗಿದೆ, ಮಕ್ಕಳ ಕಲಿಕಾ ಪೀಠೋಪಕರಣಗಳು ಹಾಗೂ ಗೋಡೆಬರಹ ಚಿತ್ರಗಳನ್ನು ಒಳಗೊಂಡಂತೆ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ ಈಗಾಗಲೇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೆಳಗಿನ ಉಪಹಾರ, ಬಿಸಿಹಾಲು, ಮಧ್ಯಾಹ್ನ ಬಿಸಿಯೂಟ ಮತ್ತು ಪೂರಕ ಪೌಷ್ಠಿಕ ಆಹಾರ (ಮೊಟ್ಟೆ/ ಚಿಕ್ಕಿ /ಬಾಳೆ ಹಣ್ಣು) ನೀಡಲು ಸಹಮತಿ ಕೋರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ.

ಸಂಖ್ಯೆ: ಇಪಿ 113 ಎಂಎಂಎಸ್ 2024

**(ಎಸ್.ಮಧು ಬಂಗಾರಪ್ಪ)**

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**

**ಸಚಿವರು.**